## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2242 |
| ಸದಸ್ಯರ ಹೆಸರು | : | ಶ್ರೀ. ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |
| ಉತ್ತರಿಸುವ ದಿನಾಂಕ | : | 26.03.2021. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಾಮರಾಜನಗರ ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರ್ ಗಳಲ್ಲಿ ಅರಿಶಿನ ಬೆಳೆಯುತ್ತಾರೆ; ವಾರ್ಷಿಕ ಉತ್ಪಾದನೆ ಅಂದಾಜು ಪ್ರಮಾಣ ಎಷ್ಟು; ಅರಿಶಿನಕ್ಕೆ ವ್ಯವಸ್ಥಿತ ಮಾರುಕಟ್ಟೆಯ ಸೌಲಭ್ಯ ಕಲ್ಪಿಸಲಾಗಿದೆಯೇ; | ಚಾಮರಾಜನಗರ ಜಿಲ್ಲೆಯಲ್ಲಿ 8465 ಹೆಕ್ಟೇರ್‌ಗಳಲ್ಲಿ ಅರಿಶಿನ ಬೆಳೆಯುತ್ತಾರೆ.<br>ವಾರ್ಷಿಕ ಉತ್ಪಾದನೆ ಅಂದಾಜು ಪ್ರಮಾಣ 34744 ಮೆಟ್ರಿಕ್ ಟನ್ ಗಳು.<br><br>ಚಾಮರಾಜನಗರ ಜಿಲ್ಲೆಯಲ್ಲಿ ಅರಿಶಿಣವನ್ನು ಸ್ಥಳೀಯ ಹಾಗೂ ನಗರ ಪ್ರದೇಶಗಳಲ್ಲಿ ಮಾರಾಟ ಮಾಡಲಾಗುತ್ತಿದ್ದು 2021-22 ನೇ ಸಾಲಿನ ಆಯವ್ಯಯ ಕಂಡಿಕೆ 83. ರಲ್ಲಿ ಚಾಮರಾಜನಗರದಲ್ಲಿ ಅರಿಶಿಣ ಮಾರುಕಟ್ಟೆಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರವಾಗಿ ಅಭಿವೃದ್ಧಿ ಪಡಿಸುವುದಾಗಿ ಪ್ರಸ್ತಾಪಿಸಲಾಗಿರುತ್ತದೆ. ಮಾರುಕಟ್ಟೆಯಲ್ಲಿ ಅರಿಶಿಣ ಧಾರಣೆಯು ಕುಸಿತವಾದ ಸಂದರ್ಭದಲ್ಲಿ, ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯಡಿ (MIS) ಪರಿಗಣಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. |
| ಆ) | ಚಾಮರಾಜನಗರದಲ್ಲಿ ಅರಿಶಿನ ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?. | ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ತೋಟಗಾರಿಕೆ ಇಲಾಖೆಯಿಂದ ಈ ಕೆಳಕಂಡ ಯೋಜನೆಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ.<br>1. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ "Incentives for Post-Harvest Management Activities"** ಕಾರ್ಯಕ್ರಮದಡಿ ಸಂಸ್ಕರಣೆ ಮತ್ತು ಮೌಲ್ಯವರ್ಧನೆ ಘಟಕ ಸ್ಥಾಪಿಸಲು ಒಟ್ಟು ಘಟಕ ವೆಚ್ಚ ರೂ.200.00 ಲಕ್ಷಗಳಿಗೆ ಶೇ.25 ರಂತೆ ಗರಿಷ್ಠ ರೂ50.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುತ್ತದೆ.<br><br>2. **ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ** ಪ್ರಾಥಮಿಕ ಸಂಸ್ಕರಣಾ ಘಟಕ ಸ್ಥಾಪಿಸಲು ಘಟಕದ ವೆಚ್ಚ ರೂ.25.00 ಲಕ್ಷಗಳಿಗೆ ಶೇಕಡ 40ರಂತೆ ರೂ.10.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುತ್ತದೆ. |

**Horti 241 HGM 2021**

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.